ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1270
ಸದಸ್ಯರ ಹೆಸರು	ಡಾ: ಜೈಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ	17.03.2020.
ಉತ್ತರಿಸುವ ಸಚಿವರು	ಗಣಿ ಮತ್ತು ಭೂವಿಜ್ಞಾನ ಸಚಿವರು

ಕ್ರ.ಸಂ.	ಪ್ರಶ್ನೆಗಳು –	ಉತ್ತರ

ಅ) ಕಳದ 03 ವರ್ಷಗಳಿಂದ ರಾಜ್ಯದಲ್ಲಿ ಗಣಿಗಾರಿಕೆ ನಡೆಸಲು ಎಷ್ಟು ಕೇಂದ್ರಗಳಿಗೆ ಅನುಮತಿಯನ್ನು ನೀಡಲಾಗಿದೆ; ಇದರಿಂದ ಸರ್ಕಾರಕ್ಕೆ ಬಂದಿರುವ ಒಟ್ಟು ಆದಾಯ ಎಷ್ಟು;

ಉತ್ತರ: ರಾಜ್ಯದಲ್ಲಿ ಕಳೆದ 3 ವರ್ಷಗಳಿಂದ ಈ ಕೆಳಕಂಡಂತೆ ಮುಖ್ಯ ಖನಿಜ ಮತ್ತು ಉಪಖನಿಜಗಳ ಗಣಿ ಗುತ್ತಿಗೆಗಳನ್ನು ಮಂಜೂರು ಮಾಡಲಾಗಿದೆ.

ಕ್ರ ಸಂ.	ಖನಿಜದ ವಿಧ	ಮಂಜೂರು ಮಾಡಿರುವ ಗಣಿ ಗುತ್ತಿಗೆಗಳ ಸಂಖ್ಯೆ	ವಿಸ್ತೀರ್ಣ (ಎಕರೆ/ಗುಂಟೆಗಳಲ್ಲಿ)
1.	ಮುಖ್ಯ ಖನಿಜ (ಕಬ್ಬಿಣದ ಅದಿರು)	07	1083.04
2.	ನಿರ್ದಿಷ್ಟ ಉಪ ಖನಿಜ (ಗ್ರಾನೈಟ್)	71	313.22
3.	ನಿರ್ದಿಷ್ಟವಲ್ಲದ ಉಪ ಖನಿಜ (ಕಟ್ಟಡ ಕಲ್ಲು, ಮುರ್ರಂ ಇತ್ಯಾದಿ)	890	2672.04
4.	ಮರಳು	281	3632.17

ಕಳೆದ 3 ವರ್ಷಗಳಿಂದ ಗಣಿಗಾರಿಕೆಯಿಂದ ಸಂಗ್ರಹವಾಗಿರುವ ರಾಜಸ್ವದ ವಿವರ ಕೆಳಕಂಡಂತಿರುತ್ತದೆ.

(ರೂ.ಕೋಟಿಗಳಲ್ಲಿ)

ಕ್ರ.ಸ.	ವರ್ಷ	ಸಂಗ್ರಹಣೆ
1.	2017–18	2746.26
2.	2018–19	3026.42
3.	2019–20 (15-02-2020ರ ವರೆಗೆ)	2979.40

ಆ) ಇದರಲ್ಲಿ ಅಧಿಕೃತ ಕೇಂದ್ರಗಳು ಸೇರಿದಂತೆ ಅನಧಿಕೃತ ಕೇಂದ್ರಗಳು ಎಷ್ಟು ಕಾರ್ಯನಿರ್ವಹಿಸುತ್ತಿವೆ; ಇವುಗಳ ವಿರುದ್ಧ ಸರ್ಕಾರವು ಯಾವ ರೀತಿ ಕ್ರಮ ಕೈಗೊಂಡಿದೆ;

ಉತ್ತರ: ಅಧಿಕೃತವಾಗಿ ಗಣಿಗಾರಿಕೆಗೆ ಗುತ್ತಿಗೆ ನೀಡಿರುವ ಪ್ರದೇಶಗಳನ್ನು ಹೊರತುಪಡಿಸಿ ಅನಧಿಕೃತವಾಗಿ ಕೆಲವು ಪ್ರದೇಶಗಳಲ್ಲಿ ಗಣಿಗಾರಿಕೆ ನಡೆಯುತ್ತಿರುವುದು ಕಂಡು ಬಂದಿರುತ್ತದೆ.

ಅಕ್ರಮವಾಗಿ ಗಣಿಗಾರಿಕೆ ನಡೆಸುತ್ತಿರುವವರ ವಿರುದ್ಧ ಎಂ.ಎಂ.(ಡಿ &ಆರ್) ಕಾಯ್ದೆ, 1957 ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ರಂತೆ ಮೊಕದ್ದಮೆಗಳನ್ನು ದಾಖಲಿಸಲು ಕ್ರಮ ಜರುಗಿಸಲಾಗುತ್ತದೆ. ಕಳೆದ ಮೂರು ವರ್ಷಗಳಲ್ಲಿ ಅನಧಿಕೃತ ಕಲ್ಲು ಮತ್ತು ಮರಳು ಗಣಿಗಾರಿಕೆ ಸಂಬಂಧ ಕೈಗೊಂಡ ಕ್ರಮದ ವಿವರ ಕೆಳಕಂಡಂತಿದೆ:

ಮುಖ್ಯ ಖನಿಜ ಗಣಿಗಾರಿಕೆ :–

ಕ್ರ ಸಂ.	ವರ್ಷ	ಪತ್ತೆ ಹಚ್ಚಿದ ಪ್ರಕರಣಗಳು	ದಾಖಲಿಸಿರುವ ಮೊಕದ್ದಮೆಗಳ ಸಂಖ್ಯೆ	ವಸೂಲಾದ ದಂಡ (ರೂ.ಲಕ್ಷಗಳಲ್ಲಿ)
1.	2017–18	01	–	0.5
2.	2018–19	05	–	2.0
3.	2019–20	02	–	–

--2

ಕಲ್ಲು ಗಣಿಗಾರಿಕೆ :-

ಕ್ರ ಸಂ.	ವರ್ಷ	ಪತ್ತೆ ಹಚ್ಚಿದ ಪ್ರಕರಣಗಳು	ದಾಖಲಿಸಿರುವ ಮೊಕದ್ದಮೆಗಳ ಸಂಖ್ಯೆ	ವಸೂಲಾದ ದಂಡ (ರೂ.ಲಕ್ಷಗಳಲ್ಲಿ)
1.	2017–18	404	114	613.25
2.	2018–19	413	108	1213.37
3.	2019–20	266	117	908.70
	ಒಟ್ಟು	1083	339	2735.32

ಮರಳು ಗಣಿಗಾರಿಕೆ:-

ಕ್ರ ಸಂ.	ವರ್ಷ	ಪತ್ತೆ ಹಚ್ಚಿದ ಪ್ರಕರಣಗಳು	ದಾಖಲಿಸಿರುವ ಮೊಕದ್ದಮೆಗಳ ಸಂಖ್ಯೆ	ವಸೂಲಾದ ದಂಡ (ರೂ.ಲಕ್ಷಗಳಲ್ಲಿ)
1.	2017–18	4007	2692	2073.36
2.	2018–19	3869	2893	910.38
3.	2019–20	1590	938	296.08
	ಒಟ್ಟು	9466	6523	3279.82

ಇ)	ಈ ರೀತಿಯ ಗಣಿಗಾರಿಕೆಯಿಂದ ಕಷ್ಟವನ್ನು ಅನುಭವಿಸುತ್ತಿರುವ ಬಗ್ಗೆ ಸಾರ್ವಜನಿಕರಿಂದ ಎಷ್ಟು ದೂರುಗಳನ್ನು ಸ್ವೀಕರಿಸಲಾಗಿದೆ; ಈ ಸಮಸ್ಯೆಯ ಪರಿಹಾರಕ್ಕೆ ಯಾವ ಕ್ರಮ ಕೈಗೊಳ್ಳಲಾಗಿದೆ?	2019–20ನೇ ಸಾಲಿನಲ್ಲಿ ಕಲ್ಲು ಗಣಿಗಾರಿಕೆಯಿಂದ ತೊಂದರೆ ಉಂಟಾಗುವುದಾಗಿ 335 ದೂರುಗಳು ಸ್ವೀಕೃತವಾಗಿರುತ್ತವೆ. ಸದರಿ ದೂರಿನ ಅಂಶಗಳನ್ವಯ ಜಿಲ್ಲಾ ಕಛೇರಿಯ ಅಧಿಕಾರಿಗಳು / ಜಾಲಿತ ದಳದ ಅಧಿಕಾರಿಗಳಿಂದ ಗಣಿ / ಕಲ್ಲುಗಣಿ ಪ್ರದೇಶವನ್ನು ಸ್ಥಳ ಪರಿಶೀಲನೆ ನಡೆಸಿ ಸಾರ್ವಜನಿಕರಿಗೆ ತೊಂದರೆ ಉಂಟಾಗದಂತೆ ನಿಯಮಾನುಸಾರ ಗಣಿಗಾರಿಕೆ ನಡೆಸುವಂತೆ ಗುತ್ತಿಗೆದಾರರಿಗೆ ಸೂಚಿಸಿ, ಸೂಕ್ತ ಕ್ರಮ ವಹಿಸಲಾಗಿರುತ್ತದೆ.

ಸಂಖ್ಯೆ: ಸಿಐ 155 ಎಂಎಂಎನ್ 2020

(ಸಿ.ಸಿ. ಪಾಟೀಲ)

ಗಣಿ ಮತ್ತು ಭೂವಿಜ್ಞಾನ ಸಚಿವರು